ಉದಯವಾಣಿ

# ಜೈನ್ ವಿವಿಯಿಂದ 46 ಲಕ್ಷ ವಿದ್ಯಾರ್ಥಿ ವೇತನ

**ಬೆಂಗಳೂರು:** ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ ಹಾಗೂ ಉತ್ತೇಜನ ನೀಡುವ ದೃಷ್ಟಿಯಿಂದ ಜೈನ್ ವಿಶ್ವವಿದ್ಯಾಲಯ ಪ್ರಥಮ ಬಿ.ಕಾಂ.ನ 163 ವಿದ್ಯಾರ್ಥಿಗಳಿಗೆ 2017ನೇ ಸಾಲಿನಲ್ಲಿ 46 ಲಕ್ಷ ರೂ. ವಿದ್ಯಾರ್ಥಿ ವೇತನ ವಿತರಿಸಿದೆ. ಇತ್ತೀಚೆಗೆ ವಿವಿಯ ಕ್ಯಾಂಪಸ್‌ನಲ್ಲಿ ಆಯೋಜಿಸಿದ್ದ ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮದಲ್ಲಿ ಜೈನ್ ವಿವಿ ಕುಲಪತಿ ಡಾ.ಎನ್.ಸುಂದರರಾಜನ್ ಅರ್ಹರಿಗೆ ವಿದ್ಯಾರ್ಥಿ ವೇತನ ವಿತರಿಸಿದರು. ಬಳಿಕ ಮಾತನಾಡಿದ ಅವರು, ದ್ವಿತೀಯ ಪಿಯುಸಿಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ತನ್ನತ್ತ ಸೆಳೆಯಲು ಹಾಗೂ ಅವರ ಮುಂದಿನ ವಿದ್ಯಾಭ್ಯಾಸಕ್ಕೆ ಉತ್ತೇಜನ ನೀಡುವ ದೃಷ್ಟಿಯಿಂದ ವಿಶ್ವವಿದ್ಯಾಲಯ ಪ್ರತಿ ವರ್ಷ ವಿದ್ಯಾರ್ಥಿ ವೇತನ ನೀಡುತ್ತಾ ಬರುತ್ತಿದೆ. ಶೇ.80ರಿಂದ 95ರಷ್ಟು ಅಂಕ ಗಳಿಸಿದ ವಾಣಿಜ್ಯ ವಿದ್ಯಾರ್ಥಿಗಳಿಗೆ ಮೆರಿಟ್ ಆಧಾರದಲ್ಲಿ ಸೂಕ್ತ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ ಎಂದು ಹೇಳಿದರು. ವಿದ್ಯಾರ್ಥಿ ವೇತನ ಸ್ವೀಕರಿಸಿದ ಬಿ.ಕಾಂ. ವಿದ್ಯಾರ್ಥಿಗಳಾದ ನವನೀತ್‌ರಾವ್, ಅನುಷ್ಕಾ ಮತ್ತಿತರರು ಮಾತನಾಡಿ, ಶೈಕ್ಷಣಿಕ ಜೀವನದಲ್ಲಿ ಉತ್ತಮ ಸಾಧಣೆ ಮಾಡಲು ಪ್ರತಿಯೊಬ್ಬ ವಿದ್ಯಾರ್ಥಿಗಳು ಆರ್ಥಿಕ ಬೆಂಬಲ ಮತ್ತು ಉತ್ತೇಜನ ಬಹಳ ಮುಖ್ಯ. ಆ ಕಾರ್ಯವನ್ನು ಜೈನ್ ವಿವಿ ಮಾಡುತ್ತಿರುವುದರಿಂದ ಬಹಳಷ್ಟು ಬಡ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಉದಯವಾಣಿ



## ವಿತರಣೆ

ಜೈನ್ ವಿವಿಯ ಕ್ಯಾಂಪಸ್‌ನಲ್ಲಿ ಇತ್ತೀಚೆಗೆ ಆಯೋಜಿಸಿದ್ದ ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮದಲ್ಲಿ ವಿವಿ ಕುಲಪತಿ ಡಾ.ಎನ್. ಸುಂದರರಾಜನ್ ಅರ್ಹರಿಗೆ ವಿದ್ಯಾರ್ಥಿ ವೇತನ ವಿತರಿಸಿದರು.